# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 07/11/2020 ರ
# ಸಭಾ ನಡವಳಿ

ದಿನಾಂಕ: 07/11/2020 ರಂದು ಬೆಳಿಗ್ಗೆ 11.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳ | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎಸ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ಗವಿಸಿದ್ದಯ್ಯ | ಕಿರಿಯ ಇಂಜಿನಿಯರ್ ವಿದ್ಯುತ್ ವಿಭಾಗ, ಬಿಬಿಎಂಪಿ |
| 4 | ಶ್ರೀ ಮತಿ ಅನಸೂಯಮ್ಮ | ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಕೆಂಗೇರಿ ಸಂಚಾರಿ ಪೊಲೀಸ್ ಠಾಣೆ |
| 5 | ಶ್ರೀಮತಿ ಮೋನಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ ಸುರೇಶ್ ಎಂ.ಎಸ್ | ಸಹಾಯಕ ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ |
| 7 | ಶ್ರೀ ಎಸ್. ರವಿಚಂದ್ರ | ಕಿರಿಯ ಅಭಿಯಂತರರು ಬೆಸ್ಕಾಂ |
| 8 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್. ಎಸ್.ಬಿ. |

Scanned with CamScanner

| | | |
|---|---|---|
| 9 | ಶ್ರೀ ಚಂದ್ರಶೇಖರ್.ಹೆಚ್ | ಸಹಾಯಕ ಅಭಿಯಂತರರು<br>ಬೆಸ್ಕಾಂ |
| 10 | ಶ್ರೀ ಸಾಯಿ ಸಂದೇಶ್ ಬಿ.ಎಸ್. | ಸಹಾಯಕ ಅಭಿಯಂತರರು,<br>ಬೃಹತ್ ನೀರುಗಾಲುವೆ ವಿಭಾಗ |
| 11 | ಶ್ರೀ ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು<br>ಬಿಬಿಎಂಪಿ |

ಶ್ರೀ ದಯಾನಂದ.ಎನ್. ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ <u>**ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ:–**</u> ಅಧ್ಯಕ್ಷರು, ಕೋವಿಡ್–19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್–19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್–19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾರ್ಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು.

❖ <u>**ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ:–**</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬೆಂಗಳೂರು ಜಲ ಮಂಡಳಿ ರವರು ಡಾಂಬರು ರಸ್ತೆಗಳನ್ನು ಅಗೆಯುತ್ತಿದ್ದು, ಕೊಳವೆ ಸಾಲುಗಳನ್ನು ಅಳವಡಿಸಿದ ನಂತರ ರಸ್ತೆಯನ್ನು ದುರಸ್ಥಿ ಪಡಿಸದೇ ಹಾಗೂ ಹೊಸದಾಗಿ ನಿರ್ಮಾನ ಮಾಡಿರುವ ಡಾಂಬರು ರಸ್ತೆಗಳನ್ನು ಅಗೆಯುತ್ತಿರುವ ಬಗ್ಗೆ ಮತ್ತು ಬಿ.ಜಿ.ಎಸ್. ಹತ್ತಿರವಿರುವ ಸಪ್ತಗಿರಿ ಕೌಂಟಿ ಬಡಾವಣೆಯಲ್ಲಿ ಒಳಚರಂಡಿ ನೀರು ಹತ್ತಿರದಲ್ಲೇ ಇರುವ ಕೆರೆಗೆ ಹರಿದುಹೋಗುತ್ತಿರುವ ಬಗ್ಗೆ ಸಭೆಯ

Scanned with CamScanner

ಗಮನಕ್ಕೆ ತರಲಾಯಿತು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಜಲ ಮಂಡಳಿಯವರು ಪೈಪ್‌ಲೈನ್ ಅಳವಡಿಸುವ ಮುನ್ನ 06 ತಿಂಗಳು ಮುಂಚಿತವಾಗಿ ರಸ್ತೆಯನ್ನು ಅಗೆಯಬೇಕಾಗಿರುವ ಬಗ್ಗೆ ಹಾಗೂ ಪೈಪ್‌ಲೈನ್ ಅಳವಡಿಸುವ ಬಗ್ಗೆ ಲಿಖಿತವಾಗಿ ಪಾಲಿಕೆಯ ಗಮನಕ್ಕೆ ತರಬೇಕೆಂದು ಹಾಗೂ ಸಪ್ತಗಿರಿ ಕೌಂಟಿ ಬಡಾವಣೆಯಲ್ಲಿ ಕಲುಷಿತ ನೀರು ಕೆರೆಗೆ ಸೇರುತ್ತಿರುವುದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲು ಜಲ ಮಂಡಳಿಯವರಿಗೆ ಸೂಚಿಸಿದರು.

❖ <u>ಘನತ್ಯಾಜ್ಯ ನಿರ್ವಹಣೆ ಬಗ್ಗೆ</u>:- ವಾರ್ಡ್ ನಂ.198ರ ಚಳಿಗಾಲ ಪ್ರಾರಂಭವಾಗಿರುವುದರಿಂದ ಮರದ ಎಲೆಗಳು ಹೆಚ್ಚಾಗಿ ಉದುರುತ್ತಿದ್ದು, ಅದನ್ನು ಸಮರ್ಪಕವಾಗಿ ವಿಲೇ ಮಾಡುವ ಬಗ್ಗೆ ಹಾಜರಿದ್ದ ನಾಗರೀಕರು ಸೂಚಿಸಿದರು. ಈ ಸಂಬಂಧ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಮರಗಳ ಎಲೆಗಳನ್ನು ಸಂಸ್ಕರಿಸುವ ಮತ್ತು ಗೊಬ್ಬರವನ್ನಾಗಿ ಪರಿವರ್ತಿಸುವ ಸಣ್ಣ ಘಟಗಳನ್ನು ಸ್ಥಾಪಿಸಲಾಗಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು.

ಮುಂದುವರೆದು ವಿಜಯಶ್ರೀ ಬಡಾವಣೆಯ ನಾಗರೀಕರು ಮಾತನಾಡಿ ಪೌರಕಾರ್ಮಿಕರು ಪ್ರತಿ ದಿನ ರಸ್ತೆಗಳನ್ನು ಗುಡಿಸಲು ಬರುತ್ತಿರುವುದಿಲ್ಲವೆಂದು ಮತ್ತು ಪೌರಕಾರ್ಮಿಕರು ಸಮರ್ಪಕವಾಗಿ ಕಸ ಸಮರ್ಪಕವಾಗಿ ಗುಡಿಸದೇ ಕಾಲಹರಣ ಮಾಡುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್‌ನಲ್ಲಿ ಬರುವ ಎಲ್ಲಾ ರಸ್ತೆಗಳನ್ನು ಪ್ರತಿದಿನ ಗುಡಿಸುವ ವ್ಯವಸ್ಥೆ ಇರುವುದಿಲ್ಲವೆಂಬ ವಿಷಯವನ್ನು ಮತ್ತು ಆ ಪ್ರದೇಶದ ಘನತ್ಯಾಜ್ಯ ಮೇಲ್ವಿಚಾರಕರವನ್ನು ಬದಲಾಯಿಸುವ ಬಗ್ಗೆ ಸಭೆಗೆ ತಿಳಿಸಿದರು.

ಹಿಂದಿನ ಸಭೆಯಲ್ಲಿ ಚರ್ಚಿಸಲಾದ ಮಹಾವೀರ್ ಲೇಕ್ ಅಪಾರ್ಟ್‌ಮೆಂಟ್ ಹಿಂಭಾಗದ ರಸ್ತೆಯಲ್ಲಿ ಅಪರಿಚಿತರು ತ್ಯಾಜ್ಯವನ್ನು ಪ್ಲಾಸ್ಟಿಕ್ ಕವರಿನಲ್ಲಿ ಕಟ್ಟಿ ಎಸೆದು ಹೋಗುತ್ತಿರುವ ಬಗ್ಗೆ ಹಾಗೂ ಇದರಿಂದಾಗಿ ಬ್ಲಾಕ್‌ಸ್ಪಾಟ್ ನಿರ್ಮಾಣವಾಗಿರುವ ಬಗ್ಗೆ ಹಾಗೂ ಸೊಳ್ಳೆಗಳ ನಿಯಂತ್ರಣಕ್ಕೆ ಸ್ಪ್ರೇ ಹಾಗೂ ಫಾಗಿಂಗ್‌ನ್ನು ಮಾಡುತ್ತಿಲ್ಲವೆಂದು ಸಭೆಯ ಗಮನಕ್ಕೆ ತಿಳಿಸಿದರು. ಈ ಸಂಬಂಧ ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಸದರಿ ಪ್ರದೇಶವು ನಿರ್ಜನ ಪ್ರದೇಶವಾಗಿದ್ದು, ಸದರಿ ರಸ್ತೆಯಲ್ಲಿ ಹಾದುಹೋಗುವ ಸಾರ್ವಜನಿಕರು ರಾತ್ರಿ ವೇಳೆಯಲ್ಲಿ ಕಸವನ್ನು ಎಸೆದು ಹೋಗುತ್ತಿರುವುದಾಗಿ ತಿಳಿಸಿದರು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಸದರಿ ಸ್ಥಳದಲ್ಲಿ ತ್ಯಾಜ್ಯ ಸುರಿದರೆ ದಂಡ ವಿಧಿಸುವುದಾಗಿ ಒಂದು ನಾಮಫಲಕವನ್ನು ಅಳವಡಿಸಲು ಮತ್ತೊಮ್ಮೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

Scanned with CamScanner

❖ <u>**ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-**</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿಹೆಚ್‌ಇಎಲ್ ಬಡಾವಣೆ 3ನೇ ಮುಖ್ಯರಸ್ತೆ, 4ನೇ ಮುಖ್ಯರಸ್ತೆ & ಕೆಂಗೇರಿ ವಿದ್ಯಾಪೀಠ ರಸ್ತೆ ವೃಷಭಾವತಿ ಸೇತುವೆಂದ ಕೋಡಿಪಾಳ್ಯದ ಕಡೆ ವಿದ್ಯುತ್ ದೀಪಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಮಾನ್ಯ ಅಧ್ಯಕ್ಷರು ಮಾತನಾಡಿ ಸಭೆಗೆ ಹಾಜರಾಗಿದ್ದ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರಿಗೆ ತಕ್ಷಣ ದೂರುಗಳಿಗೆ ಸಂಬಂಧಿಸಿ ದುರಸ್ಥಿ ಕಾರ್ಯವನ್ನು ಯಾವುದೇ ವಿಳಂಬವಿಲ್ಲದೇ ಕೈಗೊಳ್ಳಲು ಸೂಚಿಸಿದರು. ಕಿರಿಯ ಅಭಿಯಂತರರು (ವಿದ್ಯುತ್ ವಿಭಾಗ), ಬಿಬಿಎಂಪಿ ರವರು ಮಾತನಾಡಿ ವೃಷಭಾವತಿ ಸೇತುವೆಯಿಂದ ಬಂದಿರುವ ವಿದ್ಯುತ್ ಕಂಬಗಳ ಮೇಲೆ ಹೈಟೆನ್‌ಷನ್ ಲೈನ್ ಹಾದುಹೋಗಿರುವುದರಿಂದ ಬೀದಿ ದೀಪಗಳು ಪದೇ ಪದೇ ಕೆಟ್ಟು ಹೋಗುತ್ತಿರುವ ಬಗ್ಗೆ ಸಭೆಗೆ ತಿಳಿಸಿದರು. ಈ ಸಂಬಂಧ ಅಗತ್ಯ ಕ್ರಮ ಕೈಗೊಳ್ಳಲು ಬೆಸ್ಕಾಂ ಅಧಿಕಾರಿಗಳನ್ನು ಕೋರಲಾಯಿತು.

❖ <u>**ಬೆಂಗಳೂರು ವಿದ್ಯುತ್ ಸರಬರಾಜು ನಿಗಮ:-**</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹೆಚ್ಚುವರಿಯಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಲು ಬಡಾವಣೆಯ ನಾಗರಿಕರು ಕೋರಿದರು. ಈ ಸಂಬಂಧ ಬೆಸ್ಕಾಂ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಗೆ ತಿಳಿಸಿದರು.

❖ <u>**ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ:-**</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಕೃಷ್ಣಗಾರ್ಡನ್‌ನಲ್ಲಿ ಹಾದು ಹೋಗುವ ಮಳೆನೀರು ಕಾಲುವೆಯಲ್ಲಿ ಹಸಿರು ಬಣ್ಣ ಮಿಶ್ರಿತ ನೀರು ಹರಿಯುತ್ತಿದ್ದು, ಇದು ಕೆಟ್ಟವಾಸನೆಯಿಂದ ಕೂಡಿದ್ದು ಅಕ್ಕಪಕ್ಕದ ನಿವಾಸಿಗಳು ವಾಸಿಸಲು ತುಂಬಾ ತೊಂದರೆಯಾಗುತ್ತಿರುವುದರ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಬೃಹತ್ ನೀರುಗಾಲುವೆ ವಿಭಾಗದ ಅಧಿಕಾರಿಗಳು ಮಾತನಾಡಿ ಸದರಿ ವಿಷಯದ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಕರ್ನಾಟಕ ಮಾಲಿನ್ಯ ನಿಯಂತ್ರಣಾ ಮಂಡಳಿಗೆ ಪತ್ರ ಬರೆಯುವುದಾಗಿ ಸಭೆಗೆ ತಿಳಿಸಿರು.

❖ <u>**ಅರಣ್ಯ ವಿಭಾಗ, ಬಿಬಿಎಂಪಿ:-**</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಅತಿ ಎತ್ತರದ ಒಣಗಿದ ಮರವು ವಿದ್ಯುತ್ ತಂತಿಯ ಮೇಲೆ ಬಿದ್ದು, ಅನಾಹುತ ಸಂಭವಿಸುವ ಸಾಧ್ಯತೆ ಇದ್ದು ಸದರಿ ಮರವನ್ನು ತೆರವುಗೊಳಿಸುವಂತೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಅರಣ್ಯ ವಿಭಾಗದ

Scanned with CamScanner

ಅಧಿಕಾರಿಗಳು ಎಲ್ಲಾ ಸಭೆಗಳಿಗೆ ಗೈರು ಹಾಜರಾಗಿರುವುದನ್ನು ನೋಡಲ್ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಮಾನ್ಯ ಜಂಟಿ ಆಯುಕ್ತರಿಗೆ, ರಾ.ರಾ.ನಗರ ವಲಯ ರವರನ್ನು ಕೋರಲು ತೀರ್ಮಾನಿಸಿದರು.

❖ <u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ:-</u> (1) ವಾರ್ಡ್ ಸಂ.198ರಲ್ಲಿ ಕಾನ್‌ಕಾರ್ಡ್ ಬಡಾವಣೆಯ ಮುಖ್ಯರಸ್ತೆಯ ಕಾಮಗಾರಿ ಪ್ರಗತಿಯಲ್ಲಿದ್ದು, ರಸ್ತೆಯ ನಿರ್ಮಾಣ ತ್ಯಾಜ್ಯವನ್ನು ಅಲ್ಲಲ್ಲೆ ಸುರಿದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ರಸ್ತೆ ಮೂಲ ಭೂತ ಸೌಕರ್ಯ ವಿಭಾಗದ ಅಧಿಕಾರಿಗಳು ಮಾತನಾಡಿ ಸ್ಥಳ ಪರಿಶೀಲಿಸಿ ತ್ಯಾಜ್ಯವನ್ನು ತೆರವುಗೊಳಿಸಲು ನಿರ್ದೇಶನ ನೀಡಲಾಗುವುದೆಂದು ಹಾಗೂ ಸದರಿ ಕಾಮಗಾರಿಯನ್ನು ಗುತ್ತಿಗೆ ದಾರರು ಮಳೆಗಾಲವಾದ್ದರಿಂದ ಸ್ಥಗಿತಗೊಳಿಸಿರುವ ಬಗ್ಗೆ ಸಭೆಗೆ ತಿಳಿಸಿದರು.

(2) ಪಟ್ಟಣಗೆರೆ ಜಯಣ್ಣರವರ ಮನೆಯ ಮುಂಭಾಗದ ರಸ್ತೆಯಲ್ಲಿ ಜಲಮಂಡಳಿಯ ವತಿಯಿಂದ ರಸ್ತೆಯನ್ನು ಅಗೆದು ಒಳಚರಂಡಿ ಕೊಳವೆಗಳು ಮತ್ತು ಮ್ಯಾನ್‌ಹೋಲ್‌ಗಳನ್ನು ನಿರ್ಮಾಣ ಮಾಡಿದ್ದು, ನಿರ್ಮಾಣದ ನಂತರ ಮಣ್ಣಿನ ರಾಶಿಯನ್ನು ತೆರವುಗೊಳಿಸದೇ ರಸ್ತೆಯಲ್ಲೇ ಬಿಟ್ಟಿದ್ದು ಇದರಿಂದಾಗಿ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ತೊಂದರೆಯಾಗಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಜಲಮಂಡಳಿಯ ಅಧಿಕಾರಿಗಳು ಮಾತನಾಡಿ ಮಣ್ಣಿನ ರಾಶಿಯನ್ನು ಸ್ಥಳದಿಂದ ತೆರವುಗೊಳಿಸಿಕೊಡುವುದಾಗಿ ಸಭೆಗೆ ತಿಳಿಸಿದರು.

(3) ಬಿಹೆಚ್‌ಇಎಲ್ ಬಡಾವಣೆಯ ಕಿತ್ತೂರು ರಾಣಿ ಚೆನ್ನಮ್ಮ ಪಾರ್ಕ್ ಪಕ್ಕದಲ್ಲಿ ನೀರು ನಿಲ್ಲುತ್ತಿದ್ದು, ನೀರು ಹರಿದು ಹೋಗಲು ಸೂಕ್ತ ವ್ಯವಸ್ಥೆ ಮಾಡಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಸದರಿ ರಸ್ತೆಯು 80 ಅಡಿ ಅಗಲದ ಮುಖ್ಯರಸ್ತೆಯಾಗಿದ್ದು ಮತ್ತು ರಸ್ತೆ ಮೂಲಭೂತ ಸೌಕರ್ಯದ ವಿಭಾಗದ ವತಿಯಿಂದ ರಸ್ತೆಯನ್ನು ಅಭಿವೃದ್ಧಿ ಪಡಿಸಿದ್ದು, ಇದರ ಬಗ್ಗೆ ಸ್ಥಳ ಪರಿಸೀಲಿಸಿ ಅಗತ್ಯವ ಕ್ರಮ ಕೈಗೊಳ್ಳಲು ರಸ್ತೆ ಮೂಲಭೂತ ಸೌಕರ್ಯದ ವಿಭಾಗದ ಅಧಿಕಾರಿಗಳಿಗೆ ಸೂಚಿಸಲಾಯಿತು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.

Scanned with CamScanner